## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹಾಸನ ನಗರ ವ್ಯಾಪ್ತಿಯಲ್ಲಿ ಬರುವ ಚನ್ನಪಟ್ಟಣ ಕೆರೆ, ಸತ್ಯಮಂಗಲ ಕೆರೆ ಮತ್ತು ಹುಣಸಿನಕೆರೆ ಪುನಶ್ಚೇತನ ಹಾಗೂ ಹಂದಿನಕೆರೆಯಿಂದ ಸತ್ಯಮಂಗಲ ಕೆರೆಗೆ ನೀರು ತುಂಬಿಸುವ ಯೋಜನೆಯ ಅಂದಾಜು ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

*****

**ಓದಲಾಗಿದೆ :-**

1. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಇವರ ಪತ್ರ ಸಂಖ್ಯೆ:ಕನೀನಿ/ತಾಂತ್ರಿಕ- 4/ YPD-239/ 2019-20, ದಿನಾಂಕ:15-10-2019.
2. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಇವರ ಪತ್ರ ಸಂಖ್ಯೆ:ಕನೀನಿ/ತಾಂತ್ರಿಕ-4/ YPD-239/ 2020-21/1864, ದಿನಾಂಕ:02-12-2020.
3. ಸರ್ಕಾರದ ಆದೇಶ ಸಂಖ್ಯೆ:ಜಸಂಇ 13 ಎನ್‌ಹೆಚ್‌ಪಿ 2019, ದಿನಾಂಕ:28-02-2019
4. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ:ಜಸಂಇ 13 ಎನ್‌ಹೆಚ್‌ಪಿ 2019, ದಿನಾಂಕ:24-07-2019

**ಪ್ರಸ್ತಾವನೆ :-**

ಮೇಲೆ ಓದಲಾದ (1) ಮತ್ತು (2) ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು, ಇವರು ವಿಷಯದ ಬಗ್ಗೆ ಪ್ರಸ್ತಾವನೆ ಸಲ್ಲಿಸುತ್ತಾ, ಹಾಸನ ತಾಲ್ಲೂಕಿನ ಸತ್ಯಮಂಗಲ ಕೆರೆಯು ಹಾಸನ ನಗರಕ್ಕೆ ಹೊಂದಿಕೊಂಡಂತಿದ್ದು, ಬೆಳೆಯುತ್ತಿರುವ ನಗರ ಪ್ರದೇಶದಿಂದ ಕೆರೆಗೆ ಬರುವ ನೀರಿನ ಹರಿವಿನ ಹಳ್ಳಗಳ ನೀರು ಕೆರೆಗೆ ಬರುತ್ತಿರುವುದಿಲ್ಲ ಎಂದು ವರದಿ ಮಾಡಿರುತ್ತಾರೆ. ಮುಂದುವರೆದು, ಸತ್ಯಮಂಗಲ ಕೆರೆಯ ಪುನಶ್ಚೇತನವನ್ನು ಸಣ್ಣ ನೀರಾವರಿ ಇಲಾಖೆಯವರು ಕೈಗೊಂಡು ಪೂರ್ಣಗೊಳಿಸಿರುತ್ತಾರೆ. ಕೆರೆಯ ಕೆಳಭಾಗದಲ್ಲಿ ಸರ್ಕಾರಿ ಮತ್ತು ಸರ್ಕಾರೇತರ ಸಂಸ್ಥೆಗಳು ಕುಡಿಯುವ ನೀರಿಗಾಗಿ ಹಲವು ಬೋರ್‌ವೆಲ್‌ಗಳನ್ನು ಕೊರೆದಿದ್ದು, ಅವುಗಳ ಅಂತರ್ಜಲ ಮಟ್ಟವು ಸಹ ಕುಸಿದಿರುತ್ತದೆ. ಆದ್ದರಿಂದ, ಅಂತರ್ಜಲ ಮಟ್ಟವನ್ನು ಹೆಚ್ಚಿಸುವ ಸಲುವಾಗಿ ಸದರಿ ಕೆರೆಯನ್ನು ತುಂಬಿಸಲು ಅಂದಾಜನ್ನು ತಯಾರಿಸಲಾಗಿದೆ ಎಂದು ವರದಿ ಮಾಡಿರುತ್ತಾರೆ.

2. ಹಂದಿನ ಕೆರೆಯ ನೀರಿನ ಸಂಗ್ರಹಣಾ ಸಾಮರ್ಥ್ಯವು 39 ಎಂ.ಸಿ.ಎಫ್.ಟಿ. ಗಳಾಗಿದ್ದು, ಸದರಿ ಕೆರೆಯ ಜಲಾನಯನ ಪ್ರದೇಶವು 25.63 ಚ.ಕಿ.ಮೀ.ಗಳಾಗಿದ್ದು, ಒಟ್ಟಾರೆ ನೀರಿನ ಲಭ್ಯತೆ 52.86 ಎಂ.ಸಿ.ಎಫ್.ಟಿ. ಗಳಾಗಿರುತ್ತದೆ. ಈ ಮಧ್ಯೆ, ಯಗಚಿ ಎಡದಂಡೆ ನಾಲೆಯ ವಿತರಣಾ ನಾಲೆಗಳಾದ 29 ಹಾಗೂ 30 ರ ಹೆಚ್ಚುವರಿ ನೀರು ಸಹ ಹಂಚಿನ ಕೆರೆಯನ್ನು ಸೇರುತ್ತದೆ. ಆದ್ದರಿಂದ, ಸದರಿ ಕೆರೆಯಿಂದ 22 ಎಂ.ಸಿ.ಎಫ್.ಟಿ.ಯಷ್ಟು ನೀರನ್ನು ಸತ್ಯಮಂಗಲ ಮತ್ತು ಚನ್ನಪಟ್ಟಣ ಕೆರೆಗಳಿಗೆ ತುಂಬಿಸಲು ಅನುವು ಮಾಡಿಕೊಳ್ಳಲಾಗಿದೆ ಎಂದು ವರದಿ ಮಾಡಿರುತ್ತಾರೆ.

3. ಮೇಲೆ ಓದಲಾದ (4) ರ ಸರ್ಕಾರದ ತಿದ್ದುಪಡಿ ಆದೇಶದಲ್ಲಿ ಹಾಸನ ನಗರದ ಚನ್ನಪಟ್ಟಣ ಕೆರೆಯ ಅಂಗಳದಲ್ಲಿ ವಿಹಾರ ಧಾಮದ ಅಭಿವೃದ್ಧಿ ಮತ್ತು ಉದ್ಯಾನವನ ನಿರ್ಮಾಣ ಕಾಮಗಾರಿಯ ರೂ.144.00 ಕೋಟಿಗಳ ಮೊತ್ತದ ವಿವರವಾದ ಯೋಜನಾ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಪ್ರಸ್ತಾಪಿತ ಕಾಮಗಾರಿಯಲ್ಲಿ ಹಂದಿನ ಕೆರೆಯಿಂದ ಸತ್ಯಮಂಗಲ ಕೆರೆಗೆ ನೀರೊದಗಿಸುವ ಕೊಳವೆಯಿಂದ ಚನ್ನಪಟ್ಟಣ ಕೆರೆಗೆ ನೀರನ್ನು ಕೊಳವೆ ಮುಖಾಂತರ ಹರಿಸುವುದಕ್ಕೆ ಅನುವು ಮಾಡಿಕೊಳ್ಳಲಾಗಿರುತ್ತದೆ. ಆದರೆ, ಹಾಸನ ನಗರ ವ್ಯಾಪ್ತಿಯಲ್ಲಿ ಬರುವ ಚನ್ನಪಟ್ಟಣ ಕೆರೆ, ಸತ್ಯಮಂಗಲ ಕೆರೆ ಮತ್ತು ಹುಣಸಿನಕೆರೆ ಪುನಶ್ಚೇತನ ಹಾಗೂ ಹಂದಿನಕೆರೆಯಿಂದ ಸತ್ಯಮಂಗಲ ಕೆರೆಗೆ ನೀರು ತುಂಬಿಸುವ ಯೋಜನೆಯ ಕಾಮಗಾರಿಯನ್ನು ಅನುಷ್ಠಾನಗೊಳಿಸದೆ ಇದ್ದ ಪಕ್ಷದಲ್ಲಿ ಚನ್ನಪಟ್ಟಣ ಕೆರೆಗೆ ನೀರಿನ ಲಭ್ಯತೆಯು ಇಲ್ಲದಂತಾಗಿ ಮೇಲೆ ಓದಲಾದ (4) ರ ಸರ್ಕಾರದ ತಿದ್ದುಪಡಿ ಆದೇಶದನ್ವಯ ಈಗಾಗಲೇ ಆಡಳಿತಾತ್ಮಕ

ಪುಟ-2 ಕ್ಕೆ

ಅನುಮೋದನೆ ನೀಡಲಾಗಿರುವ ಕಾಮಗಾರಿಯು ಅಪೂರ್ಣಗೊಂಡಂತಾಗುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರು ವರದಿಕರಿಸಿರುತ್ತಾ, ಹಾಸನ ನಗರ ವ್ಯಾಪ್ತಿಯಲ್ಲಿ ಬರುವ ಚನ್ನಪಟ್ಟಣ ಕೆರೆ, ಸತ್ಯಮಂಗಲ ಕೆರೆ ಮತ್ತು ಹುಣಸಿನಕೆರೆ ಪುನಶ್ಚೇತನ ಹಾಗೂ ಹಂದಿನಕೆರೆಯಿಂದ ಸತ್ಯಮಂಗಲ ಕೆರೆಗೆ ನೀರು ತುಂಬಿಸುವ ಯೋಜನೆಯ ರೂ.9.95 ಕೋಟಿಗಳ ಅಂದಾಜು ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡಲು ಕೋರಿರುತ್ತಾರೆ.

4. ಸದರಿ ಅಂದಾಜು ಪ್ರಸ್ತಾವನೆಗೆ ದಿನಾಂಕ:20-09-2019 ರಂದು ಜರುಗಿದ ಕಾವೇರಿ ನೀರಾವರಿ ನಿಗಮದ 70ನೇ ಮಂಡಳಿ ಸಭೆಯು ಅನುಮೋದನೆ ನೀಡಿದ್ದು, ಸದರಿ ಕಾಮಗಾರಿಯನ್ನು ಕೈಗೊಳ್ಳುವ ಬಗ್ಗೆ 2018-19ರ ಆಯವ್ಯಯದಲ್ಲಿ ಘೋಷಿಸಲಾಗಿದೆ.

5. ಸದರಿ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ:ಜಸಂಇ 48 ಎನ್ ಹೆಚ್ ಪಿ 2019,**

**ಬೆಂಗಳೂರು, ದಿನಾಂಕ:11-01-2021**

ಹಾಸನ ನಗರ ವ್ಯಾಪ್ತಿಯಲ್ಲಿ ಬರುವ ಚನ್ನಪಟ್ಟಣ ಕೆರೆ, ಸತ್ಯಮಂಗಲ ಕೆರೆ ಮತ್ತು ಹುಣಸಿನಕೆರೆ ಪುನಶ್ಚೇತನ ಹಾಗೂ ಹಂದಿನಕೆರೆಯಿಂದ ಸತ್ಯಮಂಗಲ ಕೆರೆಗೆ ನೀರು ತುಂಬಿಸುವ ಯೋಜನೆಯ ರೂ.9.95 ಕೋಟಿಗಳ ಅಂದಾಜು ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

2. ಈ ಆದೇಶವನ್ನು ಆರ್ಥಿಕ ಇಲಾಖೆಯು ಆದೇಶ ಸಂಖ್ಯೆ:FD 01 TFP 2020, ದಿನಾಂಕ:13-01-2020 ರ ಕಂಡಿಕೆ-3 ರಲ್ಲಿ ಸರ್ಕಾರದ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

11/01/2021

( ಮನೋಹರ ವೈ. ರೊಟ್ಟೆ )
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂ-2)
ಜಲಸಂಪನ್ಮೂಲ ಇಲಾಖೆ

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಸಾಮಾನ್ಯ ಮತ್ತು ಸಾಮಾಜಿಕ ವಲಯ ಲೆಕ್ಕಪರಿಶೋಧನ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
5. ವಿಶೇಷಾಧಿಕಾರಿ ಹಾಗೂ ಪದ ನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ. ಆರ್ಥಿಕ ಕೋಶ), ವಿಧಾನಸೌಧ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಹೇಮಾವತಿ ಯೋಜನಾ ವಲಯ, ಗೊರೂರು.
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

+++++